**ಕರ್ನಾಟಕ ಸರ್ಕಾರ**

ಸಂಖ್ಯೆ: ಪಪೂಶಿ/ಆವಿಎ/ಪ್ರಾವರ್ಗ/01/2017-18

ನಿರ್ದೇಶಕರ ಕಚೇರಿ,
ಪದವಿ ಪೂರ್ವ ಶಿಕ್ಷಣ ಇಲಾಖೆ,
18ನೇ ಅಡ್ಡರಸ್ತೆ, ಮಲ್ಲೇಶ್ವರಂ,
ಬೆಂಗಳೂರು - 560 012.
ದಿನಾಂಕ: 15 -03-2018.

**ಜ್ಞಾಪನ**

ವಿಷಯ: 2017-18 ನೇ ಸಾಲಿನ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರ ವೃಂದದ ವರ್ಗಾವಣೆಗಳನ್ನು ಗಣಕೀಕೃತ ಕೌನ್ಸಿಲಿಂಗ್ ಮೂಲಕ ನಿರ್ವಹಿಸಲು ತಾತ್ಕಾಲಿಕ ಆದ್ಯತಾ ಪಟ್ಟಿಯನ್ನು ಪ್ರಕಟಿಸುವ ಕುರಿತು.

ಉಲ್ಲೇಖ: ಈ ಕಚೇರಿಯ ಇದೇ ಸಮ ಸಂಖ್ಯೆಯ ಸುತ್ತೋಲೆ ದಿನಾಂಕ: 24.01.2018.

- * -

2017-18 ನೇ ಸಾಲಿಗೆ ಪ್ರಾಂಶುಪಾಲರ ವರ್ಗಾವಣೆಗಳನ್ನು ಗಣಕೀಕೃತ ಕೌನ್ಸಿಲಿಂಗ್ ನಡೆಸಲು ವರ್ಗಾವಣೆಗೆ ಅರ್ಜಿಗಳನ್ನು ಆನ್‌ಲೈನ್ ಮೂಲಕ ಮಾತ್ರ ಸಲ್ಲಿಸಲು ಉಲ್ಲೇಖದ ಪತ್ರದಲ್ಲಿ ತಿಳಿಸಲಾಗಿತ್ತು.

ಆನ್‌ಲೈನ್ ಮುಖಾಂತರ ಸಲ್ಲಿಕೆಯಾಗಿರುವ ಪ್ರಾಂಶುಪಾಲರಿಂದ ಸ್ವೀಕರಿಸಲ್ಪಟ್ಟ ವರ್ಗಾವಣೆ ಅರ್ಜಿಗಳನ್ನು ಉಪ ನಿರ್ದೇಶಕರ ಕಚೇರಿಯಿಂದ ಪಡೆಯಲಾಗಿದ್ದು, ಬಂದಂತಹ ಅರ್ಜಿಗಳನ್ನು ಪರಿಶೀಲಿಸಿ ವರ್ಗಾವಣೆಗೆ ಅರ್ಹರಿರುವ ಮತ್ತು ಅನರ್ಹರಿರುವ ಪ್ರಾಂಶುಪಾಲರ ತಾತ್ಕಾಲಿಕ ಪಟ್ಟಿಯನ್ನು ಸಿದ್ಧಪಡಿಸಿ ಪ್ರಕಟಿಸಲಾಗಿದೆ.

ಪ್ರಕಟಿಸಲಾಗಿರುವ ತಾತ್ಕಾಲಿಕ ಪಟ್ಟಿಗಳಿಗೆ ಏನೆ ಆಕ್ಷೇಪಣೆಗಳು ಇದ್ದಲ್ಲಿ ಪೂರಕ ದಾಖಲೆಗಳೊಂದಿಗೆ ದಿನಾಂಕ: 20.03.2018 ರ ಒಳಗಾಗಿ ಉಪ ನಿರ್ದೇಶಕರು (ಆಡಳಿತ), ಪದವಿ ಪೂರ್ವ ಶಿಕ್ಷಣ ಇಲಾಖೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು 560 012 ಈ ವಿಳಾಸಕ್ಕೆ ಸಲ್ಲಿಸುವುದು.

ನಿಗದಿತ ದಿನಾಂಕದ ನಂತರ ಸಲ್ಲಿಸಲ್ಪಡುವ ಯಾವುದೇ ಆಕ್ಷೇಪಣೆಗಳನ್ನು ಪುರಸ್ಕರಿಸಲಾಗುವುದಿಲ್ಲ. ಅಂತಿಮ ಆದ್ಯತಾ ಪಟ್ಟಿ ಪ್ರಕಟಿಸಿದ ನಂತರ ಕೌನ್ಸಿಲಿಂಗ್ ದಿನಾಂಕವನ್ನು ಪ್ರಕಟಿಸಲಾಗುವುದು.

ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ.

ಪ್ರತಿಗಳು:

1. ರಾಜ್ಯದ ಎಲ್ಲಾ ಜಿಲ್ಲಾ ಉಪ ನಿರ್ದೇಶಕರು ಪದವಿ ಪೂರ್ವ ಶಿಕ್ಷಣ ಇಲಾಕೆ ಇವರಿಗೆ ಸೂಕ್ತ ಕ್ರಮಕ್ಕಾಗಿ (ಪ್ರಾಂಶುಪಾಲರ ಗಮನಕ್ಕೆ ತರಲು ತಾತ್ಕಾಲಿಕ ಪಟ್ಟಿಯನ್ನು ಸೂಚನಾ ಫಲಕದಲ್ಲಿ ಪ್ರಕಟಿಸುವುದು).
2. ಸಹಾಯಕ ನಿರ್ದೇಶಕರು, ಇ-ಆಡಳಿತ ಶಾಖೆ, ಅಂತರ್ ಜಾಲದಲ್ಲಿ ತಾತ್ಕಾಲಿಕ ಪಟ್ಟಿಯನ್ನು ಅಳವಡಿಸುವ ಬಗ್ಗೆ ಅಗತ್ಯ ಕ್ರಮಕ್ಕಾಗಿ.
3. ಕಚೇರಿ ಪ್ರತಿ.